**<u>ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ರವರ ನ್ಯಾಯಾಲಯ, ಹಾನಗಲ್</u>**

**<u>ಸಿ.ಸಿ ನಂ.776/2021</u>**

| | | | | |
|---|---|---|---|---|
| ಸಾಕ್ಷಿದಾರರ ಹೆಸರು | : | ಮರಿಯಪ್ಪ ಹರಿಜನ | ಪಿಡಬ್ಲ್ಯೂ | 04 |
| ತಂದೆಃಗಂಡನ ಹೆಸರು | : | ನೀಲಪ್ಪ | ಸಿಡಬ್ಲ್ಯೂ | 05 |
| ವಯಸ್ಸು | : | 66 ವರ್ಷ | | |
| ಉದ್ಯೋಗ | : | ವ್ಯವಸಾಯ | | |
| ವಾಸ ಸ್ಥಳ | : | ಮಾರನಬೀಡ | | |

**<u>ದಿನಾಂಕ: 12.11.2024 ರಂದು ಸಾಕ್ಷಿದಾರರನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.</u>**

**<u>ಮುಖ್ಯ ವಿಚಾರಣೆ: ಸಹಾಯಕ ಸರಕಾರಿ ಅಭಿಯೋಜಕರಿಂದ:</u>**

ನನಗೆ ಚಾಸಾ-4 ಮತ್ತು 10 ರವರು ಗೊತ್ತು. ಈಗ ತೋರುತ್ತಿರುವ ಮೊಟಾರ್ ಸೈಕಲಗಳ ಜಪ್ತು ಪಂಚನಾಮೆಯಲ್ಲಿರುವ ಸಹಿ ನನ್ನದಾಗಿರುತ್ತದೆ. ಅದನ್ನು ನಿಪಿ-4 ಎಂದು ಗುರುತಿಸಲಾಯಿತು. ಸದರಿಯವರ ಸಹಿಯನ್ನು ನಿಪಿ-4(ಎ) ಎಂದು ಗುರುತಿಸಲಾಯಿತು. ಕಳೆದ 6-7 ವರ್ಷಗಳ ಹಿಂದೆ ನಾನು ಅಪಘಾತಕ್ಕೆ ಸಂಬಂಧಪಟ್ಟಂತೆ ಪೋಲಿಸ್ ಠಾಣೆಯಲ್ಲಿ ಮಧ್ಯಾಹ್ನದ ಸಮಯದಲ್ಲಿ ಸಹಿ ಮಾಡಿರುತ್ತೇನೆ. ಆ ಸಂದರ್ಭದಲ್ಲಿ ಪೋಲಿಸರು ನನ್ನ ಸಮಕ್ಷಮ ಯಾವುದೇ ವಸ್ತುಗಳನ್ನು ಜಪ್ತು ಮಾಡಿರುವುದಿಲ್ಲ. ಈಗ ತೋರುತ್ತಿರುವ ಪೊಟೋದಲ್ಲಿರುವ ವ್ಯಕ್ತಿ ನಾನೇ ಆಗಿರುತ್ತೇನೆ. ಸದರಿ ಪೊಟೋಗಳನ್ನು ನಿಪಿ-5 ಮತ್ತು 6 ಎಂದು ಗುರುತಿಸಲಾಯಿತು. ಆ ಸಂದರ್ಭದಲ್ಲಿ ಅಪಘಾತಕ್ಕೆ ಒಳಗಾದ ಬೈಕನ್ನು ಪೋಲಿಸರು ಜಪ್ತು ಮಾಡಿದರು. ಆಗ ನನ್ನ ಜೊತೆ ಚಾಸಾ-4 ರವರು ಇದ್ದರು. ಆ ಪೊಟೋಗಳನ್ನು ಯಾವ ಉದ್ದೇಶಕ್ಕಾಗಿ ತೆಗೆದರು ಎಂಬುದು ನನಗೆ ಗೊತ್ತಿಲ್ಲ.

**<u>(ಈ ಹಂತದಲ್ಲಿ ಮಾನ್ಯ ಎಪಿಪಿ ಯವರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಅಂತಾ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೇಳಿದರು. ಅನುಮತಿ ನೀಡಲಾಗಿದೆ)</u>**

**ಪಾಟೀ ಸವಾಲುಃ ಸಹಾಯಕ ಸರಕಾರಿ ಅಭಿಯೋಜಕರಿಂದ**

ದಿನಾಂಕಃ 30.11.2018 ರಂದು ಪೋಲಿಸರು ನನ್ನ ಮತ್ತು ಚಾಸಾ-4 ಮತ್ತು 10 ರವರ ಸಮಕ್ಷಮ ಮುಂಜಾನೆ 11.00 ರಿಂದ 12.00 ಗಂಟೆ ಸಮಯದಲ್ಲಿ ಅಪಘಾತಕ್ಕೆ ಒಳಗಾದ ಬೈಕ ನಂ.ಕೆಎ -27 ಇಇ-5882 ಮತ್ತು ಕೆಎ-27 ಎಸ್-1822 ಗಳನ್ನು ಜಪ್ತು ಮಾಡಿದರು ಎಂದರೆ ಸರಿ. ಆ ಸಂದರ್ಭದಲ್ಲಿ ನಿಪಿ-5 ಮತ್ತು 6 ರಂತಹ ಪೊಟೋ ತೆಗೆದರು ಎಂದರೆ ಸರಿ.

**:ಪಾಟೀ ಸವಾಲು: ಆರೋಪಿ ಪರ ಶ್ರೀ.ಎಸ್ ಜಿ ಟಿ ವಕೀಲರಿಂದ:**

ಇಲ್ಲ ಎನ್ನುತ್ತಾರೆ.

**ಮರುವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ನ. ಸ. ಓ. ಹೇ. ಕೆ ಸರಿ ಇದೆ
ಎಂದು ಒಪ್ಪಿರುತ್ತಾರೆ.

Sd/-

ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶರು
ಸಾಕ್ಷಿಧಾರರ ಸಹಿ ಮತ್ತು ಜೆ.ಎಂ.ಎಫ್.ಸಿ, ಹಾನಗಲ್